Annexure

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ, ಬೆಂಗಳೂರು ಇದರ ವ್ಯವಸ್ಥಾಪಕ ಸಮಿತಿ ಪುನರ್ರಚನೆ :- ಆದೇಶ -

ಓದಿ: 1) ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 139 ಸೆಟಪಿ 83, ದಿನಾಂಕ 16-1-1986.

2) ಸಚಿವಾಲಯ ತರಬೇತಿ ಸಂಸ್ಥೆ ಉಪ ನಿರ್ದೇಶಕರ ಪತ್ರ ಸಂಖ್ಯೆ ಸತಸಂ 54 ಸಿಬ್ಬಂದಿ 89 ದಿನಾಂಕ 2-12-89 ಮತ್ತು 29-8-90.

ಪ್ರಸ್ತಾವನೆ:

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯನ್ನು ಪುನರ್ರಚಿಸಲಾಗಿತ್ತು. 1988ರ ಅಂತ್ಯದಲ್ಲಿ ಸಚಿವಾಲಯ ತರಬೇತಿ ಸಂಸ್ಥೆಯನ್ನು ಪುನರ ರೂಪಿಸಲಾಗಿದ್ದು ಅದರ ಕಾರ್ಯ ನಿರ್ವಹಣೆ ವಿಧಾನದಲ್ಲಿ ಬದಲಾವಣೆಯಾಗಿದೆ. ಸಂಸ್ಥೆಯ ಕಾರ್ಯ ನಿರ್ವಹಣೆಯನ್ನು ಸಮಾಲೋಚಿಸಲು ವ್ಯವಸ್ಥಾಪಕ ಸಮಿತಿಯ ಅವಶ್ಯಕತೆಯಿದ್ದು ಅದನ್ನು ಪುನರ್ರಚಿಸುವಂತೆ ಸಂಸ್ಥೆಯ ಉಪ ನಿರ್ದೇಶಕರು ಪ್ರಸ್ತಾವನೆ ಕಳುಹಿಸಿದ್ದಾರೆ.

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 148 ಇಆತ 89, ಬೆಂಗಳೂರು, ದಿನಾಂಕ 19-9-1990

ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯ ವ್ಯವಸ್ಥಾಪಕ ಸಮಿತಿಯನ್ನು ತಕ್ಷಣ ಜಾರಿಗೆ ಬರುವಂತೆ ಈ ಕೆಳಕಂಡಂತೆ ಪುನರ್ರಚಿಸಲಾಗಿದೆ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು — ಅಧ್ಯಕ್ಷರು
2. ಕಾರ್ಯದರ್ಶಿಗಳು, ಸಿಆಸುಇ — ಸದಸ್ಯರು
3. ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು — ಸದಸ್ಯರು
4. ನಿರ್ದೇಶಕರು, ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ, ಬೆಂಗಳೂರು — ಸದಸ್ಯ ಕಾರ್ಯದರ್ಶಿ
5. ಉಪ ಕಾರ್ಯದರ್ಶಿ, ಸಿಆಸುಇ (ಆ.ಸು.) — ಸದಸ್ಯರು
6. ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ) — ಸದಸ್ಯರು

ಮೇಲ್ಕಂಡ ಸಮಿತಿಯು ವರ್ಷಕ್ಕೆ ಕನಿಷ್ಠ ಮೂರು ಬಾರಿಯಾದರೂ ಸಭೆ ಸೇರಿ ಸಂಸ್ಥೆಯ ಕಾರ್ಯ ನಿರ್ವಹಣೆಯನ್ನು ಸಮಾಲೋಚಿಸಬೇಕು. ತರಬೇತಿ ಸಂಸ್ಥೆಗೆ ಸಂಬಂಧಿಸಿದ ಮುಖ್ಯ ವಿಷಯಗಳನ್ನು ಚರ್ಚಿಸಿ ಅಗತ್ಯ ಕಂಡು ಬಂದಲ್ಲಿ ಮುಂದಿನ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕೆಂದು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ಸತ್ಯನಾರಾಯಣ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಆಡಳಿತ ಸುಧಾರಣೆ).

ಇವರಿಗೆ,
1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
2) ಕಾರ್ಯದರ್ಶಿಗಳು, ಸಿಆಸುಇ, ವಿಧಾನ ಸೌಧ, ಬೆಂಗಳೂರು

.....2

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯ ವ್ಯವಸ್ಥಾಪಕ ಸಮಿತಿ ಪುನರ್‌ರಚನೆ ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ್ 53 ಟಿಇಪಿ 77, ದಿನಾಂಕ:23.01.1978
2) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 148 ಇಅತ 1989, ದಿನಾಂಕ:19.09.1990
3) ನಿರ್ದೇಶಕರು, ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ, ಇವರ ಪತ್ರ ಸಂಖ್ಯೆ: ಸತಸಂ 12 ಸಿಬ್ಬಂದಿ 2015, ದಿನಾಂಕ:04.04.2015

ಪ್ರಸ್ತಾವನೆ:

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯನ್ನು ಸ್ಥಾಪಿಸಲು ಮಂಜೂರಾತಿ ನೀಡಿ ವ್ಯವಸ್ಥಾಪಕ ಸಮಿತಿಯನ್ನು ರಚಿಸಲಾಗಿತ್ತು.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸಚಿವಾಲಯ ತರಬೇತಿ ಸಂಸ್ಥೆಯ ಕಾರ್ಯನಿರ್ವಹಣೆಯನ್ನು ಸಮೀಕ್ಷಿಸಲು ವ್ಯವಸ್ಥಾಪಕ ಸಮಿತಿ ಸಭೆಯನ್ನು ಈ ಕೆಳಕಂಡಂತೆ ಪುನರ್ರಚಿಸಲಾಗಿತ್ತು.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು – ಅಧ್ಯಕ್ಷರು
2. ಸರ್ಕಾರದ ಕಾರ್ಯದರ್ಶಿಗಳು, ಸಿಆಸುಇ – ಸದಸ್ಯರು
3. ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು – ಸದಸ್ಯರು
4. ನಿರ್ದೇಶಕರು, ಕರ್ನಾಟಕ ಸರ್ಕಾರದ ಸಚಿವಾಲಯ ತರಬೇತಿ ಸಂಸ್ಥೆ, ಬೆಂಗಳೂರು – ಸದಸ್ಯ ಕಾರ್ಯದರ್ಶಿ
5. ಉಪ ಕಾರ್ಯದರ್ಶಿ, ಸಿಆಸುಇ (ಆಸು) – ಸದಸ್ಯರು
6. ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ) – ಸದಸ್ಯರು

ಮೇಲ್ಕಂಡ ಸಮಿತಿಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಇವರನ್ನೊಳಗೊಂಡ ವ್ಯವಸ್ಥಾಪಕ -ಸಮಿತಿಯನ್ನು ಪುನರ್‌ರಚಿಸುವ ಅವಶ್ಯಕತೆ ಇದ್ದು, ಅದನ್ನು ಪುನರ್ರಚಿಸುವಂತೆ ಮೇಲೆ ಓದಲಾದ ಕ್ರಮಾಂಕ (3)ರ ದಿನಾಂಕ:04.04.2015ರ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ, ಬೆಂಗಳೂರು ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ:142:ಇಆಸು:2015, ಬೆಂಗಳೂರು, ದಿನಾಂಕ:14.07.2015**

ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಯ ವ್ಯವಸ್ಥಾಪಕ ಸಮಿತಿಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ಪುನರ್ರಚಿಸಲಾಗಿದೆ.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು – ಅಧ್ಯಕ್ಷರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ (ಆಸು) – ಸದಸ್ಯರು
3. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು – ಸದಸ್ಯರು
4. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ) – ಸದಸ್ಯರು
5. ನಿರ್ದೇಶಕರು, ಕರ್ನಾಟಕ-ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ, ಬೆಂಗಳೂರು. – ಸದಸ್ಯ ಕಾರ್ಯದರ್ಶಿ

ಮೇಲ್ಕಂಡ ಸಮಿತಿಯು ವರ್ಷಕ್ಕೆ ಕನಿಷ್ಠ ಮೂರು ಬಾರಿಯಾದರೂ ಸಭೆ ಸೇರಿ ಸಂಸ್ಥೆಯ ಕಾರ್ಯನಿರ್ವಹಣೆಯನ್ನು ಸಮೀಕ್ಷಿಸಬೇಕು. ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆಗೆ ಸಂಬಂಧಿಸಿದ ಮುಖ್ಯ ವಿಷಯಗಳನ್ನು ಚರ್ಚಿಸಿ ಅಗತ್ಯ ಕಂಡುಬಂದಲ್ಲಿ ಮುಂದಿನ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕೆಂದು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಪಿ.ಎ.ಗಾಯತ್ರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
ಆಡಳಿತ ಸುಧಾರಣೆ (ತರಬೇತಿ).

ಗೆ,

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ (ಆಸು), ಬಹುಮಹಡಿ ಕಟ್ಟಡ, ಬೆಂಗಳೂರು.
4. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು
5. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ), ವಿಧಾನಸೌಧ, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ, ಬೆಂಗಳೂರು
7. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ:ತನಿಖೆ-1 ಮತ್ತು 2), ಬೆಂಗಳೂರು.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
4. ಸರ್ಕಾರದ ಎಲ್ಲಾ ಅಪರ / ವಿಶೇಷ / ಸಹ / ಉಪ / ಅಧೀನ ಕಾರ್ಯದರ್ಶಿಗಳು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.